RNU AIR DHARWAD

**NOVEMBER 06, 2026**

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಮುಖ್ಯಾಂಶಗಳು:**

- **ರಾಜ್ಯ ಮೂಲಸೌಕರ್ಯ ಅಭಿವೃದ್ಧಿ, ಕೈಗಾರಿಕೆ, ಆರೋಗ್ಯ, ನೀರಾವರಿ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಉತ್ತೇಜನ: ಹಲವು ಮಹತ್ವದ ಯೋಜನೆಗಳಿಗೆ ಸಚಿವ ಸಂಪುಟ ಅನುಮೋದನೆ.**

- **226 ತಾಲೂಕುಗಳು ಬರಪೀಡಿತ: ರೈತರಿಗೆ ಮೊದಲ ಕಂತಿನ ಇನ್ಪುಟ್ ಸಬ್ಸಿಡಿ ಬಿಡುಗಡೆ.**
- **ದೇಶದಲ್ಲಿ ಗ್ರಿಡ್ ಮಟ್ಟದ ಇಂಧನ ಸಂಗ್ರಹಣಾ ವ್ಯವಸ್ಥೆಯನ್ನು ಬಲಪಡಿಸಲು ಕ್ರಮ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ಕಬ್ಬು ಬೆಳೆಗಾರರ ಹಿತರಕ್ಷಣೆ: ಬೆಳಗಾವಿ ಜಿಲ್ಲಾಡಳಿತದಿಂದ 'ಲಾಭ ಹಂಚಿಕೊಳ್ಳುವ" ಸೂತ್ರದಡಿ ಬೆಲೆ ನಿಗದಿಪಡಿಸಿ ಆದೇಶ.**

**ವಾರ್ತೆಗಳ ವಿವರ...**

<><><>

**ರಾಜ್ಯದ ಮೂಲಸೌಕರ್ಯ ಅಭಿವೃದ್ಧಿ,** ಕೈಗಾರಿಕೆ, ಆರೋಗ್ಯ, ನೀರಾವರಿ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಹಲವು ಮಹತ್ವದ ಯೋಜನೆಗಳಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಂಪುಟ ಸಭೆ ಕುರಿತು ಸುದ್ದಿಗೋಷ್ಠಿಯಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಖಂಡ್ರೆ ಮಾಹಿತಿ ನೀಡಿದರು. ಲೋಕೋಪಯೋಗಿ ಇಲಾಖೆಯ ವಿವಿಧ ಯೋಜನೆಗಳಡಿ 20 ಸಾವಿರ ಕೋಟಿ ವೆಚ್ಚದಲ್ಲಿ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿ, ಬೆಂಗಳೂರು ಸುತ್ತಮುತ್ತಲಿನ ರಸ್ತೆಗಳಿಗೆ 3,409 ಕೋಟಿ, ಮಲ್ಪೆ ಬಂದರಿನಲ್ಲಿ ಬಹುಮಹಡಿ ವಾಹನ ನಿಲುಗಡೆ ಹಾಗೂ ರೊಬೊಟಿಕ್ ಶಸ್ತ್ರಚಿಕಿತ್ಸಾ ಉಪಕರಣ ಖರೀದಿ ಸೇರಿದಂತೆ ಒಟ್ಟು 15 ಪ್ರಮುಖ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ. ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಮತ್ತು ಬಳ್ಳಾರಿ ಜಿಲ್ಲೆಯ ಕಂಪ್ಲಿ ಹೋಬಳಿಯ ಹರಳಹಳ್ಳಿಯಲ್ಲಿ 26.10 ಕೋಟಿ ವೆಚ್ಚದಲ್ಲಿ ನೂತನ ಕೈಗಾರಿಕಾ ವಸಾಹತುಗಳನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಆರೋಗ್ಯ ಕಾರ್ಯಕ್ರಮಗಳ ಅನು ಾನ ಮತ್ತು ಜನಜಾಗೃತಿಗಾಗಿ 28.01 ಕೋಟಿ ವೆಚ್ಚದ ಸಮಗ್ರ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ. ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಐತಿಹಾಸಿಕ ಬೌದ್ಧ ಕೇಂದ್ರ ಸನ್ನತಿಯ ಅಭಿವೃದ್ಧಿಗಾಗಿ 2026ರ ಸನ್ನತಿ ಅಭಿವೃದ್ಧಿ ಪ್ರಾಧಿಕಾರ ವಿಧೇಯಕಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವರು ತಿಳಿಸಿದರು.

<><><>

**ಹಿರಿಯೂರು ತಾಲೂಕಿನ ಧರ್ಮಪುರ ಹೋಬಳಿಯ 14 ಕೆರೆಗಳನ್ನು ತುಂಬಿಸುವ,** 35 ಕೋಟಿ ರೂಪಾಯಿ ಅಂದಾಜು ವೆಚ್ಚದ ಏತ ನೀರಾವರಿ ಯೋಜನೆಗೆ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಿದೆ. ಈ ಕುರಿತು ಮಾಹಿತಿ ನೀಡಿರುವ ಸಣ್ಣ ನೀರಾವರಿ

ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್, ನಿರಂತರ ಮಳೆ ಕೊರತೆ ಮತ್ತು ಅಂತರ್ಜಲ ಕುಸಿತ ಎದುರಿಸುತ್ತಿರುವ ಧರ್ಮಪುರ ಭಾಗಕ್ಕೆ ಈ ಯೋಜನೆ ದೀರ್ಘಕಾಲಿಕ ಜಲಭದ್ರತೆ ಒದಗಿಸಲಿದೆ ಎಂದು ತಿಳಿಸಿದ್ದಾರೆ.

<><><>

**ಕೃ ಣಾ ಅಚ್ಚುಕಟ್ಟು ಪ್ರದೇಶದಲ್ಲಿ ತೀವ್ರ ಬರ ಪರಿಸ್ಥಿತಿಯಿಂದ ರೈತರು ಸಂಕ ಟಕ್ಕೆ ಸಿಲುಕಿರುವ** ಹಿನ್ನೆಲೆಯಲ್ಲಿ, ಜಲಾಶಯಗಳಲ್ಲಿ ಲಭ್ಯವಿರುವ ನೀರಿನಲ್ಲಿ ಕುಡಿಯುವ ನೀರಿನ ಅಗತ್ಯವನ್ನು ಕಾಯ್ದಿರಿಸಿ, ಉಳಿದ ನೀರನ್ನು ನವೆಂಬರ್ 30ರವರೆಗೆ ಕಾಲುವೆಗಳಿಗೆ ಹರಿಸಿ ಬೆಳೆಗಳನ್ನು ರಕ್ಷಿಸಲು ಕ್ರಮ ಕೈಗೊಳ್ಳುವಂತೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ* ಮನವಿ ಮಾಡಿದ್ದಾರೆ. ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಪ್ರಸ್ತುತ ಒಟ್ಟಾರೆ ಸುಮಾರು 53 ಟಿಎಂಸಿ ನೀರು ಲಭ್ಯವಿದ್ದು, ಅಕ್ಟೋಬರ್ 15ರಂದು ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 12ರವರೆಗೆ ವಾರಾಬಂದಿ ಪದ್ಧತಿಯಲ್ಲಿ ಕಾಲುವೆಗಳಿಗೆ ನೀರು ಹರಿಸಲು ತೀರ್ಮಾನಿಸಲಾಗಿತ್ತು ಎಂದು ಸಚಿವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

<><><>

**ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ದೇವರಬೆಳಕೆರೆಗೆ ತುಂಗಭದ್ರಾ ನದಿಯಿಂದ** ನೀರು ತುಂಬಿಸುವ 'ಏತ ನೀರಾವರಿ ಯೋಜನೆ' ಹಾಗೂ ಭದ್ರಾ ಅಚ್ಚುಕಟ್ಟು ಬಾಧಿತ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವ 'ಭೈರನಪಾದ ಏತ ನೀರಾವರಿ ಯೋಜನೆ'ಗೆ ಸಂಬಂಧಿಸಿದಂತೆ, ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಅವರ ನೇತೃತ್ವದ ರೈತರ ನಿಯೋಗವು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು. ಸುಮಾರು 75 ಕೋಟಿ ಅಂದಾಜು ವೆಚ್ಚದ ದೇವರಬೆಳಕೆರೆ ಯೋಜನೆಯಿಂದ ಆ ಭಾಗದ ಸಾವಿರಾರು ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ದೊರೆಯಲಿದೆ. ಜೊತೆಗೆ ಸುಮಾರು 136 ಕೋಟಿ ಅಂದಾಜು ವೆಚ್ಚದ ಭೈರನಪಾದ ಏತ ನೀರಾವರಿ ಯೋಜನೆಯಿಂದ ತುಂಗಭದ್ರಾ ನದಿಯಿಂದ ನೀರೆತ್ತಿ 1 ಸಾವಿರದ 632 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದು ಹಾಗೂ 6 ಪ್ರಮುಖ ಕೆರೆಗಳನ್ನು ತುಂಬಿಸುವ ಗುರಿ ಹೊಂದಲಾಗಿದೆ.

<><><>

**2026ರ ಮುಂಗಾರು ಹಂಗಾಮಿನಲ್ಲಿ ಮಳೆಯ ತೀವ್ರ ಕೊರತೆಯಿಂದ ರಾಜ್ಯದ** ಬಹುತೇಕ ಭಾಗಗಳಲ್ಲಿ ಬೆಳೆಗಳು ಹಾನಿಗೊಳಗಾಗಿವೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಒಟ್ಟು 226 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಅಧಿಕೃತವಾಗಿ ಘೋಷಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ.
ಬರದಿಂದ ಉಂಟಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ರೈತರಿಗೆ ಮೊದಲ ಕಂತಿನ ಮಧ್ಯಂತರ ಇನ್‌ಪುಟ್ ಸಬ್ಸಿಡಿ ನೆರವು ಬಿಡುಗಡೆಗೆ ಚಾಲನೆ ನೀಡಿ ಮಾತನಾಡಿದ ಅವರು, ಜೂನ್ 1ರಿಂದ ಸೆಪ್ಟೆಂಬರ್ 30ರವರೆಗಿನ ಅವಧಿಯಲ್ಲಿ ರಾಜ್ಯದಲ್ಲಿ ವಾಡಿಕೆಯಂತೆ 852 ಮಿಲಿ ಮೀಟರ ಮಳೆಯಾಗಬೇಕಿದ್ದು, ಕೇವಲ 551 ಮಿಲಿ ಮೀಟರ ಮಳೆಯಾಗಿದೆ. ಇದರಿಂದ ಶೇಕಡ 35ರ ಟ್ಟ ಮಳೆ ಕೊರತೆ ದಾಖಲಾಗಿದೆ ಎಂದು ಹೇಳಿದರು. ದಕ್ಷಿಣ ಒಳನಾಡಿನಲ್ಲಿ ಶೇಕಡ 41, ಉತ್ತರ ಒಳನಾಡಿನಲ್ಲಿ ಶೇಕಡ 42, ಮಲೆನಾಡಿನಲ್ಲಿ ಶೇಕಡ 38 ಹಾಗೂ ಕರಾವಳಿ ಕರ್ನಾಟಕದಲ್ಲಿ ಶೇಕಡ 28ರ ಟ್ಟ ಮಳೆ ಕೊರತೆ ಕಂಡುಬಂದಿದೆ ಎಂದು ಹೇಳಿದರು.

<><><>

**ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ದೇಶದಲ್ಲಿ ಗ್ರಿಡ್ ಮಟ್ಟದ ಇಂಧನ ಸಂಗ್ರಹಣಾ ವ್ಯವಸ್ಥೆಯನ್ನು ಬಲಪಡಿಸುವ** ಉದ್ದೇಶದಿಂದ ಕೇಂದ್ರ ಸರ್ಕಾರ 14 ಸಾವಿರ 500 ಕೋಟಿ ಮೊತ್ತದ ಕಾರ್ಯಸಾಧ್ಯತಾ ಅಂತರ ನಿಧಿ (ವಿಜಿಎಫ್) ಯೋಜನೆಗೆ ಅನುಮೋದನೆ ನೀಡಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ 2026–27ನೇ ಆರ್ಥಿಕ ವ ರ್ಷದಿಂದ 2030–31ರವರೆಗೆ ಐದು ವ ರ್ಷಗಳ ಅವಧಿಗೆ ಈ ಯೋಜನೆ ಜಾರಿಗೆ ತರಲು ಅನುಮೋದನೆ ನೀಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ದೇಶದ ವಿದ್ಯುತ್ ವಲಯದ ಮೂಲಸೌಕರ್ಯವನ್ನು ಬಲಪಡಿಸುವಲ್ಲಿ ಈ ಯೋಜನೆ ಮಹತ್ವದ ಪಾತ್ರ ವಹಿಸಲಿದೆ. ನವೀಕರಿಸಬಹುದಾದ ಇಂಧನವನ್ನು ವಿದ್ಯುತ್ ಜಾಲದೊಂದಿಗೆ ಸಮರ್ಪಕವಾಗಿ ಸಂಯೋಜಿಸಲು ನೆರವಾಗುವುದರ ಜತೆಗೆ ವಿಶ್ವಾಸಾರ್ಹ, ಕೈಗೆಟುಕುವ ಹಾಗೂ ದಿನದ 24 ಗಂಟೆಯೂ ನಿರಂತರ ವಿದ್ಯುತ್ ಪೂರೈಕೆಗೆ ಉತ್ತೇಜನ ನೀಡಲಿದೆ ಎಂದು ಪ್ರಲ್ಹಾದ ಜೋಶಿ ಹೇಳಿದ್ದಾರೆ.

<><><>

**ಕಬ್ಬು ಬೆಳೆಗಾರರ ಹಿತರಕ್ಷಣೆಗೆ ಮುಂದಾಗಿರುವ ಬೆಳಗಾವಿ ಜಿಲ್ಲಾಡಳಿತ** ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ *'ಲಾಭ ಹಂಚಿಕೊಳ್ಳುವ (Profit Sharing)"* ಸೂತ್ರದಡಿಯಲ್ಲಿ ಕಬ್ಬಿನ ಬೆಲೆಯನ್ನು ನಿಗದಿಪಡಿಸಿದೆ ಆದೇಶ ಹೊರಡಿಸಿದೆ. ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಕ್ಕರೆ ಕಾರ್ಖಾನೆ ಮಾಲೀಕರ ಸಭೆಯಲ್ಲಿ ಈ ಸೂತ್ರವನ್ನು ಸಿದ್ಧಪಡಿಸಲಾಗಿದೆ. ರೈತರ ಬೇಡಿಕೆಗಳಿಗೆ ಅನುಗುಣವಾಗಿರುವ ಈ ಸೂತ್ರಕ್ಕೆ ಕಾರ್ಖಾನೆ ಮಾಲೀಕರು ಸಹಮತ ಸೂಚಿಸಿದ್ದು, ರಾ ್ಟಮಟ್ಟದಲ್ಲಿ ಇದೇ ಮೊದಲ ಬಾರಿಗೆ 'ಲಾಭ ಹಂಚಿಕೊಳ್ಳುವ ಸೂತ್ರ ಜಾರಿಗೊಳಿಸಲಾಗುತ್ತಿದೆ ಎಂದು ಬೆಳಗಾವಿ ಜಿಲ್ಲಾ ಆಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಈ ಮುಂಚೆ ಕಾರ್ಖಾನೆಗಳ ಒಟ್ಟು ಆದಾಯದ ಮೇಲೆ ಲಾಭ ಹಂಚಿಕೆ ಇರುತ್ತಿತ್ತು. ಆದರೆ ಈ ಹೊಸ ಸೂತ್ರದ ಪ್ರಕಾರ ಸಕ್ಕರೆ ಮಾರಾಟದ ಸರಾಸರಿ ಲಾಭವನ್ನು ಹಂಚಿಕೊಳ್ಳಲು ನಿರ್ಧರಿಸಲಾಗಿದೆ. ಮುಂಬರುವ ದಿನಗಳಲ್ಲಿ ಇದರಿಂದ ಕಬ್ಬು ಪೂರೈಸುವ ರೈತರಿಗೆ ಇನ್ನ ್ಟ ಉತ್ತಮ ದರ ಸಿಗಲಿದೆ ಎಂದು ಜಿಲ್ಲಾ ಆಡಳಿತ ನಿರೀಕ್ಷಿಸಿದೆ.

<><><>

**ಕರ್ನಾಟಕ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಭಾರತದ** ಪ್ರಥಮ ಶಿಕ್ಷಣ ಸಚಿವರಾದ ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನದ ಅಂಗವಾಗಿ ಇದೇ 11ರಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ರಾಜ್ಯಮಟ್ಟದ 'ರಾಷ್ಟ್ರೀಯ ಶಿಕ್ಷಣ ದಿನಾಚರಣೆ'ಯನ್ನು ಅದ್ದೂರಿಯಾಗಿ ಆಯೋಜಿಸಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಕ್ಫ್ ಖಾತೆ ಸಚಿವರಾದ ಯು.ಟಿ.ಖಾದರ್ ತಿಳಿಸಿದ್ದಾರೆ. ಮೌಲಾನ ಆಜಾದ್ ಭವನದ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಧ್ಯಮಗಳಿಗೆ ಈ ವಿ 'ಯ ತಿಳಿಸಿದ ಸಚಿವರು, ಈ ರಾಜ್ಯಮಟ್ಟದ ಸಮಾರಂಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ವಿಧಾನಸಭೆ ಹಾಗೂ ವಿಧಾನ ಪರಿ 'ತ್ತಿನ ಸಭಾಧ್ಯಕ್ಷರು–ಸಭಾಪತಿಗಳು, ಶಾಲಾ ಶಿಕ್ಷಣ ಸಚಿವರು, ಉನ್ನತ ಶಿಕ್ಷಣ ಸಚಿವರು, ಇತರ ಸಚಿವರು ಹಾಗೂ ಸ್ಥಳೀಯ ಶಾಸಕರು ಭಾಗವಹಿಸಲಿದ್ದಾರೆ ಎಂದರು. ಶಿಕ್ಷಣದ ಅಭಿವೃದ್ಧಿ, ಶೈಕ್ಷಣಿಕ ಸುಧಾರಣೆ, ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳಲ್ಲಿ ಶಿಕ್ಷಣ ವಿಸ್ತರಣೆ ಮತ್ತು ದುರ್ಬಲ ವರ್ಗಗಳ ಶೈಕ್ಷಣಿಕ ಸಬಲೀಕರಣಕ್ಕೆ ಕೊಡುಗೆ ನೀಡಿದ ಶಿಕ್ಷಣ ತಜ್ಞರು, ಸಂಸ್ಥೆಗಳ ಸ್ಥಾಪಕರು ಹಾಗೂ ಸಮಾಜಸೇವಕರನ್ನು ಈ ಸಮಾರಂಭದಲ್ಲಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

<><><>

**ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ಎರಡು ವ ರ್ಷಗಳ ಅವಧಿಯಲ್ಲಿ ಹಾಗೂ ಪ್ರಸಕ್ತ ಸಾಲಿನಲ್ಲಿ** ಮುಂಗಾರು ವೈಫಲ್ಯದಿಂದಾಗಿರುವ ಬೆಳೆ ನ ್ಟಕ್ಕೆ ಬೆಳೆ ವಿಮೆ ನೋಂದಣಿ ಮಾಡಿಸಿದ ರೈತರಿಗೆ ವಿಮಾ ಕಂಪನಿಗಳು ನೀಡುವ ಪರಿಹಾರ ಮೊತ್ತ ಅತ್ಯಂತ ಕನಿ ್ಟ ಪ್ರಮಾಣದ್ದಾಗಿದೆ

ಮಾತ್ರವಲ್ಲ ಅಂದಾಜು ಮಾಡಿದ ಬೆಳೆ ವಿಮಾ ಪರಿಹಾರ ಮೊತ್ತವೂ ಸಹ ಅವೈಜ್ಞಾನಿಕವಾಗಿದೆ ಎಂದು ಸಂಸದ ಬಿ.ವೈ.ರಾಘವೇಂದ್ರ ಹೇಳಿದ್ದಾರೆ.

ಬೆಳೆ ವಿಮೆ ಪಾವತಿಗೆ ಸಂಬಂಧಿಸಿದಂತೆ ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು; ಬೆಳೆ ಸಂಪೂರ್ಣ ಕಳೆದುಕೊಂಡು ಸಂಕ ಷ್ಟಕ್ಕೀಡಾಗಿರುವ ರೈತರಿಗೆ ಬೆಳೆ ವಿಮಾ ಕಂಪನಿಗಳು ಘೋಷಿಸುವ ಮೊತ್ತವನ್ನು ಪಾವತಿಸಲು ಮುಂದಾಗಬೇಕು ಎಂದು ಅವರು ವಿಮಾ ಕಂಪನಿಗಳ ಮುಖ್ಯಸ್ಥರಿಗೆ ಸೂಚಿಸಿದ್ದಾರೆ.

<><><>

**ಪ್ರಸಕ್ತ ಸಾಲಿನ ಹಿಂಗಾರು ಹಾಗೂ ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ** ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಅಧಿಸೂಚಿತ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಿಕೊಳ್ಳುವಂತೆ ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ಮನವಿ ಮಾಡಿದ್ದಾರೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯ ಜಿಲ್ಲಾ ಮಟ್ಟದ ಅನು ಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><><>

**ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:**

- **ರಾಜ್ಯ ಮೂಲಸೌಕರ್ಯ ಅಭಿವೃದ್ಧಿ, ಕೈಗಾರಿಕೆ, ಆರೋಗ್ಯ, ನೀರಾವರಿ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಉತ್ತೇಜನ; ಹಲವು ಮಹತ್ವದ ಯೋಜನೆಗಳಿಗೆ ಸಚಿವ ಸಂಪುಟ ಅನುಮೋದನೆ.**

- **226 ತಾಲೂಕುಗಳು ಬರಪೀಡಿತ: ರೈತರಿಗೆ ಮೊದಲ ಕಂತಿನ ಇನ್ಪುಟ್ ಸಬ್ಸಿಡಿ ಬಿಡುಗಡೆ.**
- **ದೇಶದಲ್ಲಿ ಗ್ರಿಡ್ ಮಟ್ಟದ ಇಂಧನ ಸಂಗ್ರಹಣಾ ವ್ಯವಸ್ಥೆಯನ್ನು ಬಲಪಡಿಸಲು ಕ್ರಮ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ಕಬ್ಬು ಬೆಳೆಗಾರರ ಹಿತರಕ್ಷಣೆ: ಬೆಳಗಾವಿ ಜಿಲ್ಲಾಡಳಿತದಿಂದ 'ಲಾಭ ಹಂಚಿಕೊಳ್ಳುವ" ಸೂತ್ರದಡಿ ಬೆಲೆ ನಿಗದಿಪಡಿಸಿ ಆದೇಶ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ**

<><><><><><><>